# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 456 (527) |
| ಸದಸ್ಯರ ಹೆಸರು | : | ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 30/01/2026 |
| ಉತ್ತರಿಸುವ ಸಚಿವರು | : | ಸಮಾಜ ಕಲ್ಯಾಣ ಸಚಿವರು |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕರ್ನಾಟಕದಲ್ಲಿ ಸಮಾಜ ಕಲ್ಯಾಣ ಇಲಾಖೆ ವ್ಯಾಪ್ತಿಯಲ್ಲಿ ಬರುವ ವಿವಿಧ ವಸತಿ ಶಾಲೆ, ಕಾಲೇಜು ಮತ್ತು ವಸತಿ ನಿಲಯಗಳಲ್ಲಿ ಕಳೆದ 3 ವರ್ಷಗಳಲ್ಲಿ ಸಾವನ್ನಪ್ಪಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು; | ಸಮಾಜ ಕಲ್ಯಾಣ ಇಲಾಖೆಯ ಅಧೀನದಲ್ಲಿ ಕಾರ್ಯನಿರ್ವಹಿಸಲಾಗುತ್ತಿರುವ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಸತಿ ನಿಲಯಗಳಲ್ಲಿ ಕಳೆದ ಮೂರು ವರ್ಷಗಳಿಂದ 23 ವಿದ್ಯಾರ್ಥಿಗಳು ನಿಲಯಗಳಲ್ಲಿ ಆತ್ಮಹತ್ಯೆ, ಅಸಹಜ ಮತ್ತಿತರ ಕಾರಣಗಳಿಂದ ಸಾವನ್ನಪ್ಪಿರುತ್ತಾರೆ.<br><br>ಮುಂದುವರೆದು, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದಲ್ಲಿನ ವಸತಿ ನಿಲಯಗಳಲ್ಲಿ ಕಳೆದ 3 ವರ್ಷಗಳಲ್ಲಿ 21 ವಿದ್ಯಾರ್ಥಿಗಳು ಸಾವನ್ನಪ್ಪಿರುತ್ತಾರೆ. |
| ಆ) | ವಿದ್ಯಾರ್ಥಿಗಳ ಸಾವಿನ ಪ್ರಕರಣಗಳೂ ಹೇಗೆ (ಆತ್ಮಹತ್ಯೆ, ಅಸಹಜ ಅಥವಾ ಇತರೆ ಕಾರಣಗಳಿಗಾಗಿ) ಸಂಭವಿಸಿವೆ; (ಜಿಲ್ಲಾವಾರು, ವರ್ಷವಾರು ಹಾಗೂ ವಸತಿ ಶಾಲೆ, ಕಾಲೇಜು ಮತ್ತು ವಸತಿ ನಿಲಯಗಳಲ್ಲಿ ಘಟಿಸಿದ ಒಟ್ಟು ಸಂಖ್ಯೆಯ ಮಾಹಿತಿ ನೀಡುವುದು); | ಸಮಾಜ ಕಲ್ಯಾಣ ಇಲಾಖೆಯ ಅಧೀನದಲ್ಲಿ ಕಾರ್ಯನಿರ್ವಹಿಸಲಾಗುತ್ತಿರುವ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಸತಿ ನಿಲಯಗಳಲ್ಲಿ ಕಳೆದ 3 ವರ್ಷಗಳಲ್ಲಿ ವಿದ್ಯಾರ್ಥಿಗಳ ಸಾವಿನ ಪ್ರಕರಣಗಳ ಮಾಹಿತಿಯನ್ನು ಅನುಬಂಧದಲ್ಲಿ ನೀಡಿದೆ.<br><br>ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವಸತಿ ಶಾಲೆ, ಕಾಲೇಜು ಮತ್ತು ವಸತಿ ನಿಲಯಗಳಲ್ಲಿ ಕಳೆದ 3 ವರ್ಷಗಳಲ್ಲಿ ವಿದ್ಯಾರ್ಥಿಗಳ ಸಾವಿನ ಪ್ರಕರಣಗಳು (ಆತ್ಮಹತ್ಯೆ. ಅಸಹಜ ಅಥವಾ ಇತರೆ ಕಾರಣಗಳಿಗಾಗಿ) ಜಿಲ್ಲಾವಾರು ವಿವರ ಈ ಕೆಳಕಂಡಂತಿದೆ. |

**2023-2025 ರವರೆಗೆ ಜಿಲ್ಲಾವಾರು ಶಾಲೆಯಲ್ಲಿ ಮೃತ ಪಟ್ಟ ವಿದ್ಯಾರ್ಥಿಗಳ ವಿವರ**

| ಕ್ರ.ಸಂ | ಜಿಲ್ಲೆ | ಒಟ್ಟು ಪ್ರಕರಣಗಳು | ವೈದ್ಯಕೀಯ ಪ್ರಕರಣ | ಆಕಸ್ಮಿಕ ಪ್ರಕರಣ | ಆತ್ಮಹತ್ಯೆ ಪ್ರಕರಣ |
|---|---|---|---|---|---|
| 1 | ಚಿಕ್ಕಬಳ್ಳಾಪುರ | 1 | 1 | 0 | 0 |
| 2 | ದಾವಣಗೆರೆ | 1 | 0 | 1 | 0 |
| 3 | ಕೋಲಾರ | 4 | 0 | 4 | 0 |
| 4 | ರಾಮನಗರ | 1 | 0 | 1 | 0 |
| 5 | ತುಮಕೂರು | 1 | 0 | 0 | 1 |
| 6 | ಬೆಳಗಾವಿ | 2 | 1 | 1 | 0 |
| 7 | ಬೀದರ್ | 2 | 0 | 1 | 1 |
| 8 | ಕಲಬುರಗಿ | 1 | 0 | 0 | 1 |
| 9 | ರಾಯಚೂರು | 3 | 0 | 2 | 1 |
| 10 | ಚಾಮರಾಜನಗರ | 1 | 0 | 1 | 0 |
| 11 | ಚಿಕ್ಕಮಗಳೂರು | 3 | 0 | 1 | 2 |
| 12 | ಮಂಡ್ಯ | 1 | 1 | 0 | 0 |
| | **ಒಟ್ಟು** | **21** | **3** | **12** | **6** |

**ಇ)** ವಸತಿ ಶಾಲೆ, ಕಾಲೇಜು ಮತ್ತು ವಸತಿ ನಿಲಯಗಳಲ್ಲಿ ಲೈಂಗಿಕ ಶೋಷಣೆ/ದೌರ್ಜನ್ಯಕ್ಕೆ ಒಳಗಾದ ಪ್ರಕರಣಗಳಿವೆಯೇ; ಇದ್ದಲ್ಲಿ, ಕಳೆದ 3 ವರ್ಷಗಳಲ್ಲಿ ವರದಿಯಾದ ಪ್ರಕರಣಗಳ ಮಾಹಿತಿ ನೀಡುವುದು; (ಜಿಲ್ಲಾವಾರು, ವರ್ಷವಾರು ಮಾಹಿತಿ ಒದಗಿಸುವುದು)

ಸಮಾಜ ಕಲ್ಯಾಣ ಇಲಾಖೆಯಲ್ಲಿ ವಸತಿ ಶಾಲೆ, ಕಾಲೇಜು ಮತ್ತು ವಸತಿ ನಿಲಯಗಳಲ್ಲಿ ಲೈಂಗಿಕ ಶೋಷಣೆ/ದೌರ್ಜನ್ಯಕ್ಕೆ ಒಳಗಾದ ಪ್ರಕರಣಗಳು ಈ ಕೆಳಕಂಡಂತಿವೆ.

**ಜಿಲ್ಲೆಗಳಲ್ಲಿ ವರದಿಯಾದ ಲೈಂಗಿಕ ದೌರ್ಜನ್ಯದ ವಿವರ**

| ಕ್ರ.ಸಂ | ಜಿಲ್ಲೆಯ ಹೆಸರು | ದಾಖಲಾದ ಪ್ರಕರಣ ಸಂಖ್ಯೆ | ವರ್ಷ |
|---|---|---|---|
| 1 | ಚಿಕ್ಕಮಗಳೂರು | 1 | 2022-23 |
| 2 | ತುಮಕೂರು | 1 | 2024-25 |

ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದಿಂದ ಇಲ್ಲಿಯವರೆಗೆ ಲೈಂಗಿಕ ಶೋಷಣೆ/ದೌರ್ಜನ್ಯಕ್ಕೆ ಒಳಗಾದ ಪ್ರಕರಣಗಳು ಈ ಕೆಳಕಂಡಂತಿವೆ.

| ಕ್ರಸಂ | ವರ್ಷ | ಒಟ್ಟು ಪ್ರಕರಣಗಳು | ಇಲಾಖಾ ವಿಚಾರಣಾ ನಡೆಯುತ್ತಿರುವ ಪ್ರಕರಣಗಳು | ಅಂತಿಮ ಆದೇಶ ಹೊರಡಿಸಲು ಬಾಕಿ ಇರುವ ಪ್ರಕರಣಗಳು | ಮುಕ್ತಾಯ ಗೊಂಡ ಪ್ರಕರಣಗಳು |
|---|---|---|---|---|---|
| 1 | 2023 | 5 | 1 (ಇಲಾಖಾ ವಿಚಾರಣೆಗೆ ನ್ಯಾಯಾಲಯದಿಂದ ತಡೆಯಾಜ್ಞೆ ಇರುತ್ತದೆ) | 1 | 3 |
| 2 | 2024 | 7 | 1 | 3 | 3 |
| 3 | 2025 | 1 | 0 | 1 | 0 |
| | **ಒಟ್ಟು** | **13** | **2** | **5** | **6** |

ಅಂತಿಮ ಆದೇಶ ಹೊರಡಿಸಿರುವ 06 ಪ್ರಕರಣಗಳ ಪೈಕಿ 02 ಪ್ರಕರಣಗಳಲ್ಲಿನ ಇಬ್ಬರು ಆರೋಪಿತ ನೌಕರರನ್ನು CCA ನಿಯಮಾವಳಿಗಳನ್ವಯ ಕಡ್ಡಾಯ ನಿವೃತ್ತಿಯ ದಂಡನೆಯನ್ನು ವಿಧಿಸಿ ಆದೇಶ ಹೊರಡಿಸಲಾಗಿರುತ್ತದೆ.

**ಈ)** ಲೈಂಗಿಕ ದೌರ್ಜನ್ಯ/ಶೋಷಣೆ ಎದುರಾಗುವ ಸಂದರ್ಭದಲ್ಲಿ ತಮ್ಮನ್ನು ಸ್ವಯಂ ರಕ್ಷಿಸಿಕೊಳ್ಳಲು ವಿದ್ಯಾರ್ಥಿಗಳಿಗೆ ಮಾಹಿತಿ ನೀಡಲಾಗಿದೆಯೇ;

ಸಮಾಜ ಕಲ್ಯಾಣ ಇಲಾಖೆಯ ಅಧೀನದಲ್ಲಿ ಕಾರ್ಯನಿರ್ವಹಿಸಲಾಗುತ್ತಿರುವ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಸತಿ ನಿಲಯಗಳಲ್ಲಿ ದಾಖಲಾತಿ ಹೊಂದಿರುವ ವಿದ್ಯಾರ್ಥಿ ನಿಲಯಗಳಿಗೆ ಸ್ವಯಂ ರಕ್ಷಿಸಿಕೊಳ್ಳಲು ಆತ್ಮ ಸ್ಥೈರ್ಯವನ್ನು ಹೆಚ್ಚಿಸುವ ಸಲುವಾಗಿ ಕಾರಟೆ/ಜೂಡೋ/ಟೇಕ್ವಾಂಡೊ ತರಬೇತಿಯನ್ನು ನೀಡಲಾಗುತ್ತದೆ.

ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದಲ್ಲಿ 6 ರಿಂದ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿನಿಯರಿಗೆ ಸ್ವಯಂ ರಕ್ಷಿಸಿಕೊಳ್ಳಲು 2021-22ನೇ ಸಾಲಿನಿಂದ "ಓಬವ್ವ ಆತ್ಮರಕ್ಷಣಾ ಕಲೆ" ಕರಾಟೆ ತರಬೇತಿಯನ್ನು ನೀಡಲಾಗುತ್ತಿದೆ.

2025-26ನೇ ಸಾಲಿಗೆ "ಓಬವ್ವ ಆತ್ಮರಕ್ಷಣಾ ಕಲೆ" ತರಬೇತಿಯನ್ನು ನೀಡಲು ಸರ್ಕಾರದ ಆದೇಶ ಸಂಖ್ಯೆ: ಸಕಇ 124 ಎಂಡಿಎಸ್ 2024 ದಿನಾಂಕ: 24.06.2025 ರಲ್ಲಿ ಅನುಮೋದನೆ ನೀಡಿದ್ದು, ಅದರಂತೆ 2025-26ನೇ ಸಾಲಿನಲ್ಲಿ "ಓಬವ್ವ ಆತ್ಮರಕ್ಷಣಾ ಕಲೆ" ಕರಾಟೆ ತರಬೇತಿಯನ್ನು ನೀಡಲಾಗುತ್ತಿದೆ.

ವಸತಿ ಶಾಲೆ/ಕಾಲೇಜುಗಳಲ್ಲಿ ಪೊಲೀಸ್, ಅಗ್ನಿಶಾಮಕ, ಸಮಾಜ ಕಲ್ಯಾಣ ಇಲಾಖೆ ಮತ್ತು ಮಕ್ಕಳ ಸಹಾಯವಾಣಿ ಸಂಖ್ಯೆಗಳನ್ನು ಶಾಶ್ವತ ಫಲಕದಲ್ಲಿ ಪ್ರದರ್ಶಿಸಲು ದಿನಾಂಕ:02.12.2025ರಂದು ಸುತ್ತೋಲೆ ಹೊರಡಿಸಲಾಗಿರುತ್ತದೆ.

| | | |
|---|---|---|
| ಉ) | ವಸತಿ ಶಾಲೆ, ಕಾಲೇಜು ಮತ್ತು ವಸತಿ ನಿಲಯಗಳಲ್ಲಿ ವಿದ್ಯಾರ್ಥಿಗಳ ಸುರಕ್ಷತೆ ಮತ್ತು ಭದ್ರತೆಗಾಗಿ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು? | ಸಮಾಜ ಕಲ್ಯಾಣ ಇಲಾಖೆಯ ಅಧೀನದಲ್ಲಿ ಕಾರ್ಯನಿರ್ವಹಿಸಲಾಗುತ್ತಿರುವ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಸತಿ ನಿಲಯಗಳ ಸುರಕ್ಷತೆ ಮತ್ತು ಭದ್ರತೆಗಾಗಿ ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗಿದೆ.<br><br>ಸರ್ಕಾರದ ಆದೇಶ ಸಂಖ್ಯೆ:SWD/EDU/ED6/48/2023 Date:28.03.2023 ಹಾಗೂ ಆಯುಕ್ತರ ಸುತ್ತೋಲೆ ಸಂಖ್ಯೆ: SWD/EDU/ED6/48/2023/1009904 Date: 29.07.2025 ಇಲಾಖೆಯ ವಿದ್ಯಾರ್ಥಿ ನಿಲಯಗಳ ವಸತಿ ಶಾಲೆಗಳಿಗೆ ಅನಧಿಕೃತ ವ್ಯಕ್ತಿಗಳ ಪ್ರವೇಶಕ್ಕೆ ನಿರ್ಭಂದಿಸಿ ಮಾರ್ಗಸೂಚಿಯನ್ನು ಹೊರಡಿಸಲಾಗಿದೆ.<br><br>ಸರ್ಕಾರದ ಆದೇಶ ಸಂಖ್ಯೆ: ಸಕಇ 136ಪಕವಿ 2023, ದಿ: 31-08-2023 ಸಮಾಜ ಕಲ್ಯಾಣ ಇಲಾಖಾ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ವಿದ್ಯಾರ್ಥಿನಿಲಯಗಳಲ್ಲಿ ದಾಖಲಾಗಿರುವ ನಿಲಯಾರ್ಥಿಗಳಿಗೆ POCSO ಕಾಯ್ದೆಯ ಬಗ್ಗೆ ಅರಿವು ಮೂಡಿಸುವ ಬಗ್ಗೆ ಹಾಗೂ ಮೆಟ್ರಿಕ್ ನಂತರದ ಬಾಲಕಿಯರ ವಿದ್ಯಾರ್ಥಿನಿಲಯಗಳಲ್ಲಿ ಲೈಂಗಿಕ ದೌರ್ಜನ್ಯ Good and Bad Touch ಹಾಗೂ POCSO ಕಾಯ್ದೆಗಳ ಬಗ್ಗೆ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಸಹಯೋಗದೊಂದಿಗೆ ವಿದ್ಯಾರ್ಥಿನಿಲಯಗಳಲ್ಲಿ ಬಾಲಕಿಯರ ಸಮಾಲೋಚನಾ ಕೇಂದ್ರಗಳನ್ನು ಆರಂಭಿಸಿರುವ ಆದೇಶ ಹೊರಡಿಲಾಗಿದೆ.<br><br>ಸುತ್ತೋಲೆ ಸಂಖ್ಯೆ:ಸಕನಿ/ಇಡಿ-7/ಸಿಆರ್ -85/2022-23 ದಿನಾಂಕ:31.01.2023 ರಲ್ಲಿ ಇಲಾಖೆಯ ವ್ಯಾಪ್ತಿಯಲ್ಲಿ ನಿರ್ವಹಿಸಲಾಗುತ್ತಿರುವ ವಿದ್ಯಾರ್ಥಿ ನಿಲಯಗಳಲ್ಲಿ ಕಡ್ಡಾಯವಾಗಿ ಆರೋಗ್ಯ ಇಲಾಖೆಯಿಂದ ಬಾಲಕಿಯರಿಗೆ ಮಾಹೆಯಾನ ವೈದ್ಯಕೀಯ ತಪಾಸಣೆಯನ್ನು ಕೈಗೊಳ್ಳಲಾಗುತ್ತಿದೆ.<br><br>ಇಲಾಖೆಯಲ್ಲಿನ ವಿದ್ಯಾರ್ಥಿನಿಲಯಗಳಲ್ಲಿ ವಿದ್ಯಾರ್ಥಿಗಳಿಗೆ ಸಹಾಯವಾಣಿಯನ್ನು ಅನುಷ್ಠಾನಗೊಳಿಸಲಾಗುತ್ತಿದ್ದು, ವಿದ್ಯಾರ್ಥಿಗಳು 1098 ಗೆ ಸಹಾಯ ವಾಣಿಗೆ ಕರೆ ಮಾಡಿ ಅವರ ಕುಂದು ಕೊರತೆಯನ್ನು ಹಾಗೂ ವಿದ್ಯಾರ್ಥಿ ಸ್ನೇಹಿ ವಿಧಾನಗಳನ್ನು ಅನುಸರಿಸಲು ಆದೇಶಿಸಲಾಗಿರುತ್ತದೆ.<br><br>ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದಲ್ಲಿನ ವಸತಿ ಶಾಲೆ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ ವೈದ್ಯಕೀಯ ತಪಾಸಣೆ ನಡೆಸುವ ಕುರಿತಂತೆ ಸರ್ಕಾರದ ಸುತ್ತೋಲೆ ಸಂಖ್ಯೆ:ಸಕಇ 212 ಎಂಡಿಎಸ್ 2025 (P) ದಿನಾಂಕ:08.09.2025 ರಲ್ಲಿ ವಸತಿ ಶಾಲೆ ಕಾಲೇಜುಗಳ, ವಿದ್ಯಾರ್ಥಿನಿಲಯಗಳ ವಿದ್ಯಾರ್ಥಿಗಳಿಗೆ ವೈದ್ಯಕೀಯ ತಪಾಸಣೆ ಕುರಿತಂತೆ ವಿವರವಾದ ನಿರ್ದೇಶನಗಳನ್ನು ನೀಡಲಾಗಿರುತ್ತದೆ.<br><br>ಸರ್ಕಾರದ ಸುತ್ತೋಲೆ ಅನ್ವಯ ದಿನಾಂಕ:22.09.2025 ರಂದು ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು, ಮುಖ್ಯಕಾರ್ಯನಿರ್ವಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್, ಜಿಲ್ಲಾ ಮಟ್ಟದ ಅಧಿಕಾರಿಗಳು ಮತ್ತು ವಸತಿ ಶಾಲೆ/ಕಾಲೇಜುಗಳ ಪ್ರಾಂಶುಪಾಲರು ಮತ್ತು ಸಿಬ್ಬಂಧಿಗಳಿಗೆ ಸಂಘದ ಕಛೇರಿಯಿಂದ ವಿವರವಾದ ಸುತ್ತೋಲೆಯನ್ನು ಹೊರಡಿಸಲಾಗಿರುತ್ತದೆ.<br><br>ವಿದ್ಯಾರ್ಥಿಗಳ ಸಮಗ್ರ ಶೈಕ್ಷಣಿಕ, ಮಾನಸಿಕ, ಶಾರೀರಿಕ, ನೈತಿಕ ಅಭಿವೃದ್ಧಿಗಾಗಿ ಪ್ರತಿ 20 ರಿಂದ 25 ವಿದ್ಯಾರ್ಥಿಗಳಿಗೆ ಒಬ್ಬ ಶಿಕ್ಷಕರನ್ನು "ಮಾರ್ಗದರ್ಶಕ-ಪೋಷಕ ಶಿಕ್ಷಕ (Mentor com parent Teacher)" ಎಂದು ಹಂಚಿಕೆ ಮಾಡಿ, ನಿಯೋಜಿಸಿ ಅನುಷ್ಠಾನಗೊಳಿಸಲು ಎಲ್ಲಾ ವಸತಿ ಶಾಲೆ/ಕಾಲೇಜುಗಳ ಪ್ರಾಂಶುಪಾಲರುಗಳಿಗೆ ಸೂಚಿಸಿ ಸುತ್ತೋಲೆಯನ್ನು ಹೊರಡಿಸಲಾಗಿರುತ್ತದೆ. |

| | | |
|---|---|---|
| | | ಮಕ್ಕಳ ಮತ್ತು ಮಹಿಳಾ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಇಲಾಖೆಯಿಂದ ಹೊರಡಿಸಿರುವ ಕರ್ನಾಟಕ ರಾಜ್ಯ ಮಕ್ಕಳ ನೀತಿ -2016 ಪರಿಷ್ಕೃತ -2023ರನ್ವಯ ವಸತಿ ಶಾಲೆ/ಕಾಲೇಜುಗಳಲ್ಲಿ ಮಹಿಳೆಯ ಮೇಲಿನ ಲೈಂಗಿಕ ಕಿರುಕುಳ (ತಡೆಗಟ್ಟುವಿಕೆ, ನಿಷೇಧಿಸುವಿಕೆ, ನಿವಾರಿಸುವಿಕೆ) 2013ರ ಕಾಯ್ದೆಯನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ದಿನಾಂಕ:22.09.2025ರಲ್ಲಿ ಈ ಕಛೇರಿಯಿಂದ ವಿವರವಾದ ಸುತ್ತೋಲೆಯನ್ನು ಹೊರಡಿಸಲಾಗಿರುತ್ತದೆ.<br><br>ಸರ್ಕಾರದ ಆದೇಶ ಸಂಖ್ಯೆ:ಸಕಇ 258 ಎಂಡಿಎಸ್ 2024 ದಿನಾಂಕ: 04.10.2024 ರಲ್ಲಿ ತಹಶೀಲ್ದಾರ್ ರವರ ಅಧ್ಯಕ್ಷತೆಯಲ್ಲಿ ತಾಲ್ಲೂಕು ಮಟ್ಟದ ವಿದ್ಯಾರ್ಥಿಗಳ ಸುರಕ್ಷಾ ಮೇಲ್ವಿಚಾರಣಾ ಸಮಿತಿ ಹಾಗೂ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾ ಮಟ್ಟದ ವಿದ್ಯಾರ್ಥಿಗಳ ಮೇಲುಸ್ತುವಾರಿ ನಿರ್ವಹಣಾ ಸಮಿತಿ ರಚಿಸಿ ಆದೇಶಿಸಲಾಗಿರುತ್ತದೆ.<br><br>ವೃತ್ತ ಆರಕ್ಷಕ ನಿರೀಕ್ಷಕರು ತಮ್ಮ ವ್ಯಾಪ್ತಿಯ ವಸತಿ ಶಾಲೆಗಳಿಗೆ ಭೇಟಿ ನೀಡಿ ವಿದ್ಯಾರ್ಥಿಗಳೊಂದಿಗೆ ಸಂವಾದ ನಡಿಸಿ, ವಿದ್ಯಾರ್ಥಿನಿಯರ ಮೇಲೆ ನಡೆಯುತ್ತಿರುವ ದೌರ್ಜನ್ಯ ತಡೆಗಟ್ಟಲು ತೆಗೆದುಕೊಳ್ಳಬಹುದಾದ ಅರಿವು ಮೂಡಿಸಲು ಆಯಾ ವ್ಯಾಪ್ತಿಯ ವೃತ್ತ ಆರಕ್ಷಕ ನಿರೀಕ್ಷಕರನ್ನು ತಪಾಸಣಾ ಅಧಿಕಾರಿಯನ್ನಾಗಿ ನೇಮಿಸಿ ಆದೇಶಿಸಲಾಗಿರುತ್ತದೆ.<br><br>ಮೇಲ್ಕಂಡ ಕ್ರಮಗಳ ಜೊತೆಯಲ್ಲಿ, ಮಾನ್ಯ ಅಪರ ಕಾರ್ಯದರ್ಶಿಗಳು, ಹಾಗೂ ಅಭಿವೃದ್ಧಿ ಆಯುಕ್ತರು, ಕರ್ನಾಟಕ ಸರ್ಕಾರ ಇವರು ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ವಸತಿ ಶಾಲೆ/ಕಾಲೇಜುಗಳ, ಅಲ್ಪಸಂಖ್ಯಾತರ ವಸತಿ ಶಾಲೆಗಳ ಮತ್ತು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು ಹಾಗೂ ಸಮಾಜ ಕಲ್ಯಾಣ, ಪರಿಶಿಷ್ಟ ವರ್ಗಗಳ ಕಲ್ಯಾಣ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಗಳ ವಿದ್ಯಾರ್ಥಿನಿಲಯಗಳ ವಿದ್ಯಾರ್ಥಿಗಳ ಸುರಕ್ಷತೆಯ ಹಿತದೃಷ್ಟಿಯಿಂದ Karnataka Suicide Prevention Policy-2025ಯ ಕರಡು ಸಿದ್ಧಪಡಿಸಲಾಗಿದ್ದು, Policyಯ ಅಂತಿಮ ಹಂತದ ಪ್ರಕ್ರಿಯೆಯಲ್ಲಿರುತ್ತದೆ. |

**SWD/36/MDS/2026**

**(ಡಾ: ಹೆಚ್.ಸಿ ಮಹದೇವಪ್ಪ)**

ಸಮಾಜ ಕಲ್ಯಾಣ ಸಚಿವರು.